ಇ) ಬಂದಿದೆ.

ಈ) ಈ ಯೋಜನೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಾವತಿ ಮಾಡುವ ಕುರಿತು

೯೪೯. ಶ್ರೀ ಕಂಶಾಲ (ಸೂಳ್ಯ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ ?

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರ ಹಿಂದುಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನವನ್ನು ಯಾವಾಗ ಪಾವತಿ ಮಾಡಲಾಗುವುದು ?

ಆ) ಈ ವಿದ್ಯಾರ್ಥಿ ವೇತನವನ್ನು ಶೈಕ್ಷಣಿಕ ವರ್ಷದ ಆರಂಭದಲ್ಲಿ ಅಥವಾ ಮಧ್ಯಾಂತರದಲ್ಲಿ ಪಾವತಿ ಮಾಡುವುದರಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಸರಕಾರದವರ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಮೇಲ್ಕಂಡ ಸಲಹೆಯನ್ನು ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ಜಾರಿಗೊಳಿಸುವರೆ ?

ಶ್ರೀ ವಿ.ಎಲ್. ಪಾಟೀಲ್ (ಸಮಾಜ ಕಲ್ಯಾಣ ಮಂತ್ರಿಗಳು).—

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡುವ ಕ್ರಮವು, ಶಿಕ್ಷಣ ಸಂಸ್ಥೆಗಳಿಗೆ ಅರ್ಜಿಗಳನ್ನು ವಿತರಿಸುವುದರೊಂದಿಗೆ ಜುಲೈ ತಿಂಗಳಿಂದ ಪ್ರಾರಂಭವಾಗಿ ನೂತನ ಮತ್ತು ನವೀಕರಣ ಅರ್ಜಿಗಳ ಪ್ರತ್ಯೇಕ ಪರಿಶೀಲನೆಯ ನಂತರ ನವೆಂಬರ್ ತಿಂಗಳಲ್ಲಿ ಮುಕ್ತಾಯವಾಗುತ್ತದೆ.

ಆ) ಹೌದು, ಹಾಲಿ ನಿಗದಿ ಪಡಿಸಿರುವ ವೇಳಾ ಪಟ್ಟಿಯಂತೆ ವಿದ್ಯಾರ್ಥಿವೇತನಗಳು ಸಂಬಂಧ ಪಟ್ಟ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಮಧ್ಯಾಂತರದಲ್ಲಿ ಪಾವತಿಯಾಗುವಂತೆ ಮುಂಜಾಗ್ರತೆ ವಹಿಸಲಾಗಿದೆ.

ಇ) 'ಆ' ಪ್ರಶ್ನೆಯ ಉತ್ತರದಿಂದ ಉದ್ಭವಿಸುವುದಿಲ್ಲ.

ಸೂಪಾ ತಾಲ್ಲೂಕಿನ ಜೂಯಿಡದಲ್ಲಿನ ಪಶು ವೈದ್ಯಶಾಲೆಗೆ ಸ್ವಂತ ಕಟ್ಟಡ ಮಂಜೂರು ಮಾಡುವುದು

೯೦೧ ಶ್ರೀ ಪ್ರಭಾಕರ್ ರಾಣೆ (ಕಾರವಾರ).—ಮಾನ್ಯ ಪಶು ವೈದ್ಯ ಹಾಗೂ ಪಶು ಸಂಗೋಪನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ ?

ಅ) ಸೂಪಾ ತಾಲ್ಲೂಕಿನ ಜೂಯಿಡಾದಲ್ಲಿ ಪಶು ವೈದ್ಯ ಶಾಲೆಗೆಸ್ವಂತ ಕಟ್ಟಡವಿಲ್ಲದೆ ಅದು ಸೂಕ್ತವಲ್ಲದ ಸ್ಥಳದಲ್ಲಿಕಾರ್ಯನಿರ್ವಹಿಸುತ್ತಿರುವ ವಿಚಾರ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಸದರಿ ವೈದ್ಯಶಾಲೆಗೆ ಸೂಕ್ತ ಸ್ಥಳದಲ್ಲಿ ಸ್ವಂತ ಕಟ್ಟಡ ಕಟ್ಟಿಸಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಸಿದ್ದರಾಮಯ್ಯ (ಪಶುಸಂಗೋಪನಾ ಮತ್ತು ಪಶು ವೈದ್ಯ ಸೇವಾ ರಾಜ್ಯಸಚಿವರು).—

ಅ) ಬಂದಿದೆ.

ಆ) ಈ ಬಗ್ಗೆ ಕ್ರಮ ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯೊಡನೆ ವ್ಯವಹರಿಸಲಾಗುತ್ತಿದೆ.